ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	42
ಮಾನ್ಯ ಸದಸ್ಯರ ಹೆಸರು	:	ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	13-12-2021
ಉತ್ತರಿಸುವ ಸಚಿವರು	:	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಕೊಡಗು ಜಿಲ್ಲೆಯಲ್ಲಿ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ವ್ಯವಸ್ಥೆ ಕಲ್ಪಿಸುವಂತೆ ಬಹುಕಾಲದಿಂದ ಬೇಡಿಕೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಆ	ಬಂದಿದ್ದಲ್ಲಿ, ಇದುವರೆವಿಗೂ ಜಿಲ್ಲೆಯಲ್ಲಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ವ್ಯವಸ್ಥೆ ಕಲ್ಪಿಸದಿರಲು ಕಾರಣಗಳೇನು;	ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮಡಿಕೇರಿಯಲ್ಲಿ 2020ರಲ್ಲಿ ಹೆಚ್ಚುವರಿಯಾಗಿ 450 ಹಾಸಿಗೆ ಸಾಮರ್ಥ್ಯದ ಬೋಧಕ ಆಸ್ಪತ್ರೆಯನ್ನು ನಿರ್ಮಾಣ ಮಾಡಲಾಗುತ್ತಿದೆ. ಸದರಿ ಆಸ್ಪತ್ರೆಯಲ್ಲಿ ಸುಸಜ್ಜಿತವಾದ ವಾರ್ಡ್‌ಗಳು, ಶಸ್ತ್ರ ಚಿಕಿತ್ಸಾ ಕೊಠಡಿ, ಪ್ರಯೋಗಾಲಯ ಮಲ್ಟಿ ಸ್ಪೆಷಾಲಿಟಿ ವಿಭಾಗಗಳಾದ ವೈದ್ಯಕೀಯ ವಿಭಾಗ, ಶಸ್ತ್ರ ಚಿಕಿತ್ಸಾ ವಿಭಾಗ, ಕೀಲು ಮತ್ತು ಮೂಳೆ ವಿಭಾಗ, ನೇತ್ರ ಚಿಕಿತ್ಸಾ ವಿಭಾಗ, ಅರವಳಿಕೆ ಶಾಸ್ತ್ರ ವಿಭಾಗ, ಕಿವಿ ಮೂಗು ಗಂಟಲು ವಿಭಾಗ, ಸ್ತ್ರೀ ಮತ್ತು ಪ್ರಸೂತಿ ರೋಗ ವಿಭಾಗ, ದಂತ ಚಿಕಿತ್ಸಾ ವಿಭಾಗ, ಕ್ಷಯ ರೋಗ ವಿಭಾಗ, ಚರ್ಮರೋಗ ವಿಭಾಗ, ಮನೋ ರೋಗ ವಿಭಾಗ, ರೇಡಿಯಾಲಜಿ ವಿಭಾಗಕ್ಕೆ ವ್ಯವಸ್ಥೆ ಕಲ್ಪಿಸಲು ತೀರ್ಮಾನಿಸಲಾಗಿದೆ.
ಇ	ಜಿಲ್ಲೆಯಲ್ಲಿ ಯಾವ ಕಾಲಮಿತಿಯೊಳಗೆ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ವ್ಯವಸ್ಥೆ ಕಲ್ಪಿಸಲಾಗುವುದು;	ಮಡಿಕೇರಿಯ ಜಿಲ್ಲಾ ಆಸ್ಪತ್ರೆಯನ್ನು ಕೊಡಗು ವೈದ್ಯಕೀಯ ವಿಜ್ಞಾನಗಳ ಅಧೀನ ಬೋಧಕ ಆಸ್ಪತ್ರೆಯನ್ನಾಗಿ 2016ರಲ್ಲಿ ಮಾರ್ಪಡಿಸಿ ಭಾರತೀಯ ವೈದ್ಯಕೀಯ ಮಂಡಳಿ ನಿಯಮಾನುಸಾರ ಮೇಲ್ದರ್ಜೆಗೇರಿಸಲಾಗಿದ್ದು, ಅದರ ಭಾಗವಾಗಿ ಹೆಚ್ಚುವರಿಯಾಗಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದ್ದು, ಕಾಮಗಾರಿ ಪೂರ್ಣಗೊಂಡ ನಂತರ ಮಲ್ಟಿ ಸ್ಪೆಷಾಲಿಟಿ ವ್ಯವಸ್ಥೆ ಕಲ್ಪಿಸಲಾಗುವುದು.
ಈ	ಕೊಡಗು ಜಿಲ್ಲೆ ಮಡಿಕೇರಿಯ ಜಿಲ್ಲಾ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಕುರಿತು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು?	

ಆಕುಕ 135 ಎಸ್‌ಬಿವಿ 2021

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು